ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಹೈಯರ್ ಎಜುಕೇಷನ್ ಕೌನ್ಸಿಲ್ ಸಲಹೆಗಳ ಬಗ್ಗೆ

ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)

409 (535) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಾಲ್ಯಾಭೀವೃದ್ಧಿ ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಹೈಯರ್ ಎಜಕೇಷನ್ ಕೌನ್ಸಿಲ್ ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು 2018-19, 2019-20 ರಲ್ಲಿ ನೀಡಿದ ಸಲಹೆಗಳಾವುವು ; ಅನುಷ್ಠಾನಗೊಂಡ ಸಲಹೆಗಳಾವುವು ; (ವಿವರ ನೀಡುವುದು)

(ಆ) ಹೊಸ ಶಿಕ್ಷಣ ನೀತಿ ಜಾರಿಗೆ ತರಲು ಇಲಾಖೆ ಮುಂದೆ ಇರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಕರ್ನಾಟಕ ಹೈಯರ್ ಎಜುಕೇಷನ್ ಕೌನ್ಸಿಲ್ ನೀಡಿದ ಸಲಹೆಗಳನ್ನು ಇಲಾಖೆ ಜಾರಿಗೆ ತಂದಿದೆಯೇ ; ಇದರಲ್ಲಿ ಸದಸ್ಯರುಗಳ ಸಂಖ್ಯೆ ಎಷ್ಟು ;

(ಈ) ಕರ್ನಾಟಕ ಹೈಯರ್ ಎಜುಕೇಷನ್ ಕೌನ್ಸಿಲ್‌ನಲ್ಲಿರುವ ಅಧ್ಯಕ್ಷರು ಮತ್ತು ಸದಸ್ಯರುಗಳು ತಮ್ಮ ಕೆಲಸದ ಒತ್ತಡದಿಂದ ಉನ್ನತ ಶಿಕ್ಷಣಕ್ಕೆ ಸಲಹೆ ನೀಡಲು ಸಾಧ್ಯವಾಗುತ್ತಿಲ್ಲ ಎಂಬ ಮಾಹಿತಿ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;